## ದಿನಾಂಕ: 08/12/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | SWD |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135 | BESCOM |
| 3 | ಶ್ರೀ. ಮುತ್ಯಾಲು | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 4 | ಶ್ರೀಮತಿ. ಸುಧಾ.ಎಸ್ | ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಪೋಲಿಸ್ ಇಲಾಖೆ, ಸಂಚಾರಿ ಮತ್ತು ಕಾನೂನು ಸುವ್ಯವಸ್ಥೆ |
| 5 | ಶ್ರೀ. ಮಾರುತಿ | BWSSB, ಕೆಲಸ ಪರವೀಕ್ಷಕರು | |
| 6 | ಶ್ರೀ. ಭಾರ್ಗವ್.ಎಸ್ | ಮಾರ್ಷಲ್ | |
| 7 | ಶ್ರೀಮತಿ. ಮಂಜುಳ | ವಾರ್ಡ್ ಸದಸ್ಯರು | |
| 8 | ಶ್ರೀ. ಖೈಜರ್ ಅಲಾಂ | ವಾರ್ಡ್ ಸದಸ್ಯರು | |
| 9 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |
| 10 | ಶ್ರೀ. ಫೈಜ್ ಅಲಾಂ | ವಾರ್ಡ್ ಸದಸ್ಯರು | |
| 11 | ಶ್ರೀ. ಅಫ್ಸರ್ ಪಾಷ | ವಾರ್ಡ್ ಸದಸ್ಯರು | |
| 12 | ಶ್ರೀ. ಅಫ್ರೋಜ್ ಖಾನ್ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ | ಸಭೆಯಲ್ಲಿ ನೀರು ಮತ್ತು ಒಳಚರಂಡಿ ಹಾಗೂ ವಿದ್ಯುತ್‌ಗೆ ಸಂಬಂಧಪಟ್ಟಂತೆ ಹಲವಾರು ದೂರುಗಳು ಬರುತ್ತಿದ್ದು, ದೂರುಗಳನ್ನು ಅಹವಾಲಿಸಿ ಪರಿಹರಿಸಲು ಸಂಬಂದಪಟ್ಟ BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ಅಧ್ಯಕ್ಷರು ಗಮನಿಸಿ ಸಂಬಂಧಪಟ್ಟ ಅಧಿಕಾರಿಗಳ ಹೆಸರಿಗೆ ಪತ್ರ ಬರೆಯಲು ಸಭೆಯಲ್ಲಿ ನಿರ್ದೇಶಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

| | | | |
|---|---|---|---|
| 2 | Residential Areaಗಳಲ್ಲಿ ವಾಣಿಜ್ಯ ಉಪಯೋಗಕ್ಕೆ ಬದಲಿಸುತ್ತಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ Residential ಬಡಾವಣೆಗಳನ್ನು ವಾಣಿಜ್ಯ ಉಪಯೋಗಕ್ಕಾಗಿ ಸಣ್ಣ ಸಣ್ಣ ಕೈಗಾರಿಕೆಗಳಾಗಿ ಬದಲಿಸಿರುವುದರಿಂದ ವಾಹನ ದಟ್ಟಣೆ, ಶಬ್ದ ಮಾಲಿನ್ಯ ಹಾಗೂ ಕಾರ್ಖಾನೆಗಳ ತ್ಯಾಜ್ಯ ಹೆಚ್ಚುತ್ತಿರುವುದರ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ, ಈ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳು ನಿಯಮಾನುಸಾರ ಕ್ರಮವಹಿಸುವಂತೆ ಸಭೆಯಲ್ಲಿ ನಿರ್ದೇಶಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) |
| 3 | ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕೆಗಳ ತ್ಯಾಜ್ಯವನ್ನು ರಾಜಕಾಲುವೆಗೆ ವಿಲೇವಾರಿ ಮಾಡುತ್ತಿರುವ ಬಗ್ಗೆ | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ತ್ಯಾಜ್ಯವನ್ನು ರಾಜಕಾಲುವೆಗೆ ವಿಲೇವಾರಿ ಮಾಡುತ್ತಿದ್ದು, ಮಳೆನೀರು ಸರಾಗವಾಗಿ ಹರಿಯದೇ ಅಡಚಣೆಯಾಗುತ್ತಿದ್ದು, ಈ ಬಗ್ಗೆ ತ್ಯಾಜ್ಯವನ್ನು ಸಣ್ಣ ಕೈಗಾರಿಕೆಗಳ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) |
| 4 | ವಾರ್ಡ್ ವ್ಯಾಪ್ತಿಯಲ್ಲಿ ಜೈವಿಕ ತ್ಯಾಜ್ಯವನ್ನು ವಿಲೇವಾರಿ ಮಾಡುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಜೈವಿಕ ತ್ಯಾಜ್ಯವನ್ನು ವಿಲೇವಾರಿ ಸಂಬಂಧ ಪಶುಪಾಲನಾ ವಿಭಾಗದ ಅಧಿಕಾರಿಗೆ ಪತ್ರ ಬರೆದು ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ತಿಳಿಸಲು ನಿರ್ದೇಶಿಸಲಾಯಿತು. | ಸಹಾಯಕ ಅಭಿಯಂತರರು ವಾರ್ಡ್:135 |
| 5 | ಪೈಪ್‌ಲೈನ್ ರಸ್ತೆಯ ರಾಜಕಾಲುವೆಗೆ ತಡೆಗೋಡೆ ನಿರ್ಮಿಸುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಪೈಪ್‌ಲೈನ್ ರಸ್ತೆಗೆ ಹಾದುಹೋಗಿರುವ ರಾಜಕಾಲುವೆಗೆ ಸರ್ವಿಸ್ ರಸ್ತೆಗೆ ತಡೆಗೋಡೆ ಇಲ್ಲದಿರುವುದರಿಂದ ಅವಘಡ ಸಂಭವಿಸುವ ಸಂದರ್ಭವಿರುವುದರಿಂದ ರಸ್ತೆಗೆ ಹಾದುಹೋಗಿರುವ ರಾಜಕಾಲುವೆಗೆ ಅಡ್ಡಲಾಗಿ ತಡೆಗೋಡೆ ನಿರ್ಮಿಸಲು ಸಭೆಯಲ್ಲಿ ನಿರ್ದೇಶಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.

6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.